ನಗರಪಾಲಿಕೆಗಳಲ್ಲಿ ಕೆಲಸ ಮಾಡುವ ನೌಕರರ ಸೇವಾ ನಿಯಮ.

1939(2476)

ಶ್ರೀ ಗುರುಸ್ವಾಮಿ ಎ.ಎಸ್(ಚಾಮುಂಡೇಶ್ವರಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿವಿಧ ನಗರ ಪಾಲಿಕೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರು ಯಾವುದೇ ವರ್ಗಾವಣೆಗಳಿಗೆ ಒಳಪಡದ ಕಾರಣ ಸ್ವಹಿತಾಸಕ್ತಿ ಬೆಳೆಸಿಕೊಳ್ಳುವ ಸಾಧ್ಯತೆ ಇದ್ದರೂ ಸಹ ಇವರ ಆಂತರಿಕ ವರ್ಗಾವಣೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?

ಆ) ಈ ರೀತಿ ಸ್ಥಳೀಯ ರಾಜಕೀಯದಲ್ಲಿ ಒತ್ತಾಸೆಯಾಗಿ ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷತೆ ತೋರುವುದನ್ನು ತಪ್ಪಿಸಲು ಒಂದು ಅಪೆಕ್ಸ್ ಬಾಡಿ ಸ್ಥಾಪಿಸಿ ತನ್ಮೂಲಕ ಆಂತರಿಕ ವರ್ಗಾವಣೆ ವ್ಯವಸ್ಥೆ ಜಾರಿಗೆ ತರುವ ಇಚ್ಛೆ ಸರ್ಕಾರಕ್ಕೆ ಇದೆಯೇ?

ಇ) ಇದ್ದಲ್ಲಿ ಎಂದಿನಿಂದ ಜಾರಿಗೆ ತರಲಾಗುವುದು? ಇಲ್ಲವಾದಲ್ಲಿ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಇರುವ ಅಡಚಣೆಗಳೇನು?

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು):

ಅ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಈ ಬಗ್ಗೆ ಕೆ.ಎಂ.ಸಿ. ಕಾಯ್ದೆಗೆ ಸೂಕ್ತ ತಿದ್ದುಪಡಿ ತರುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

ಮೈಸೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಘಟಕಗಳ ಅಭಿವೃದ್ಧಿ.

1940(2477)

ಶ್ರೀ ಗುರುಸ್ವಾಮಿ ಎ.ಎಸ್(ಚಾಮುಂಡೇಶ್ವರಿ): ಮಾನ್ಯ ಸಣ್ಣ ಪ್ರಮಾಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಒಂದು ವರ್ಷ ಅವಧಿಯಲ್ಲಿ ಮೈಸೂರು ಜಿಲ್ಲೆಯಲ್ಲಿ ಹಾಗೂ ತಾಲ್ಲೂಕಿನಲ್ಲಿ ಎಷ್ಟು ಸಣ್ಣ ಕೈಗಾರಿಕಾ ಘಟಕಗಳು ಸ್ಥಾಪನೆಯಾಗಿದೆ; ಮೈಸೂರು